# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** 2

**ಸದಸ್ಯರ ಹೆಸರು** ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)

**ಉತ್ತರಿಸುವ ದಿನಾಂಕ** 12.09.2022

**ಉತ್ತರಿಸುವ ಸಚಿವರು** ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದಲ್ಲಿ ಕನ್ನಡ ಮಾತನಾಡುವವರ ಸಂಖ್ಯೆ 52% ಕ್ಕಿಂತಲೂ ಕಡಿಮೆ ಮತ್ತು ರಾಜ್ಯದಲ್ಲಿ ಸುಮಾರು 68% ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ಕುರಿತು ಸರ್ಕಾರದ ನಿಲುವೇನು; | ಬೆಂಗಳೂರು ನಗರದಲ್ಲಿ ಕನ್ನಡ ಮಾತನಾಡುವವರ ಸಂಖ್ಯೆ 52% ಕ್ಕಿಂತಲೂ ಕಡಿಮೆ ಮತ್ತು ರಾಜ್ಯದಲ್ಲಿ ಸುಮಾರು 68% ಇರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಆದರೆ, ಬೆಂಗಳೂರಿನಲ್ಲಿ ಕನ್ನಡ ಮಾತನಾಡುವವರ ಸಂಖ್ಯೆ ಕಡಿಮೆಯಾಗುತ್ತಿರುವುದು ಗಮನಕ್ಕೆ ಬಂದಿದೆ. |
| ಆ) | ಬೆಂಗಳೂರು ಕರ್ನಾಟಕದ ರಾಜಧಾನಿಯಾಗಿದ್ದು, ಇಲ್ಲಿ ಕನ್ನಡ ಮಾತನಾಡುವವರ ಸಂಖ್ಯೆ 52%ರ ಆಸುಪಾಸಿನಲ್ಲಿರುವುದು ತುಂಬಾ ಗಂಭೀರ ವಿಷಯವಾಗಿದ್ದು, ಈ ಕುರಿತು ಸರ್ಕಾರದ ನಿಲುವೇನು; | |
| ಇ) | ಕನ್ನಡ ರಾಜ್ಯದ ಆಡಳಿತ ಭಾಷೆಯಾಗಿದ್ದರೂ ಸಹ ಸರ್ಕಾರವೇ ಹಲವಾರು ಆದೇಶಗಳನ್ನು ಆಂಗ್ಲ ಭಾಷೆಯಲ್ಲಿ ಹೊರಡಿಸುತ್ತಿರುವುದು ಕನ್ನಡ ಭಾಷೆಗೆ ಅಪಮಾನ ಮಾಡಿದಂತಲ್ಲವೇ; ಸರ್ಕಾರದ ಕಾರ್ಯದರ್ಶಿ ಮಟ್ಟದ ಅಧಿಕಾರಿಗಳು ಕಡತದ ಟಿಪ್ಪಣಿಯನ್ನು ಆಂಗ್ಲ ಭಾಷೆಯಲ್ಲಿ ಬರೆಯುತ್ತಿರುವ ಕುರಿತು ಸರ್ಕಾರವು ಯಾವ ಕ್ರಮ ಕೈಗೊಂಡಿದೆ; | ರಾಜ್ಯದ ಅಧಿಕೃತ ಆಡಳಿತ ಭಾಷೆ ಕನ್ನಡವನ್ನು ಸಚಿವಾಲಯದಿಂದ ಹಿಡಿದು ಗ್ರಾಮ ಪಂಚಾಯಿತಿ ಕಛೇರಿಗಳೂ ಸೇರಿದಂತೆ ಎಲ್ಲೆಡೆ, ಸರ್ಕಾರಿ ಕಛೇರಿಗಳ ಆಡಳಿತ ವ್ಯವಸ್ಥೆಯಲ್ಲಿ ಕನ್ನಡವನ್ನು ಪ್ರಧಾನವಾಗಿ ಬಳಸುವಂತಾಗಬೇಕು ಎಂಬುವುದು ಸರ್ಕಾರದ ಭಾಷಾನೀತಿ. ಈ ನೀತಿಯ ಅನುಷ್ಠಾನಕ್ಕೆಂದು ಕಾಲಕಾಲಕ್ಕೆ ಸರ್ಕಾರವು ಅನೇಕ ಆದೇಶ/ಸುತ್ತೋಲೆಗಳನ್ನು ಹೊರಡಿಸಿದೆ. ಈ ಸಂಬಂಧ ಹೊರಡಿಸಲಾದ ಕೆಲವು ಪ್ರಮುಖ ಸುತ್ತೋಲೆಗಳು ಈ ಕೆಳಗಿನಂತಿವೆ:<br>1) ಸಂಖ್ಯೆ.ಸಂಕಇ/39/ಕೆಓಎಲ್/2002 ದಿನಾಂಕ:13.06.2002<br>2) ಸಂಖ್ಯೆ.ಕಸಂವಾಪ್ರ/6/ಕೆಓಎಲ್/2003 ದಿನಾಂಕ:03.08.2003<br>3) ಸಂಖ್ಯೆಕಸಂವಾಪ್ರ/89/ಕೆಓಎಲ್/2017 ದಿನಾಂಕ:24.03.2018<br>4) ಸಂಖ್ಯೆ.ಕಸಂವಾ/149/ಕೆಓಎಲ್ ಆಕ/2020 (ಭಾಗ–2) ದಿನಾಂಕ:27.11.2020<br>5) ಸಂಖ್ಯೆ.ಕಸಂವಾ/149/ಕೆಓಎಲ್ ಆಕ/2020 (ಭಾಗ–2) ದಿನಾಂಕ:09.03.2021<br>6) ಸಂಖ್ಯೆ.ಮುಕಾ/2/ಜಿಇಎನ್/2022 ದಿನಾಂಕ:06.09.2022 |

| | | |
|---|---|---|
| | | ರಾಜ್ಯ ಸರ್ಕಾರದ ಆಡಳಿತ ಭಾಷಾ ನೀತಿಯ ಅನುಷ್ಠಾನಕ್ಕಾಗಿ ಮತ್ತು ಡಾ:ಸರೋಜಿನಿ ಮಹಿಷಿ ವರದಿಯ ಅಂಗೀಕೃತ ಶಿಫಾರಸ್ಸುಗಳನ್ನು ಜಾರಿಗೆ ತರಲು ಸರ್ಕಾರಕ್ಕೆ ಸಲಹೆ ನೀಡಲು ಹಾಗು ರಾಜ್ಯ ಸರ್ಕಾರದ ಆಡಳಿತ ಎಲ್ಲಾ ಹಂತಗಳಲ್ಲೂ ಕನ್ನಡವನ್ನು ಬಳಸುವಂತೆ ನೋಡಿಕೊಳ್ಳುವ ಸಲುವಾಗಿ ಕನ್ನಡ ಅಭಿವೃದ್ಧಿ ಪ್ರಾಧಿಕಾರವನ್ನು ರಚಿಸಲಾಗಿರುತ್ತದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಧಿಕಾರವು ನಿರಂತರವಾಗಿ, ಕನ್ನಡ ಭಾಷೆ ಬಳಕೆಯ ಬಗ್ಗೆ ಬರುವ ದೂರುಗಳು ಹಾಗೂ ಪರಿಶೀಲನೆಯಲ್ಲಿ ಕಂಡು ಬರುವ ನಿರ್ಲಕ್ಷ್ಯಗಳನ್ನು ತೀವ್ರವಾಗಿ ಪರಿಗಣಿಸಿ ಸಂಬಂಧಪಟ್ಟವರ / ಇಲಾಖಾ ಮುಖ್ಯಸ್ಥರುಗಳಿಗೆ ಕಾರಣ ಕೇಳಿ ನೋಟೀಸ್ ನೀಡಿ / ಇಲಾಖಾ ಮುಖ್ಯಸ್ಥರಿಗೆ ಪತ್ರಗಳನ್ನು ಬರೆದು ನಿರಂತರವಾಗಿ ಕನ್ನಡ ಭಾಷೆಯ ಬಳಕೆಯನ್ನು ಪರಿಶೀಲಿಸುತ್ತಿದೆ. |
| ಈ) | ಕನ್ನಡ ಭಾಷೆಯು ಅವನತಿಯತ್ತ ಸಾಗುತ್ತಿದ್ದು, ಮುಂದೊಂದು ದಿನ ಲುಪ್ತವಾಗುವ ಸಾಧ್ಯತೆ ಇರುವುದರಿಂದ ಕನ್ನಡ ಭಾಷೆಯ ಉಳಿವು ಮತ್ತು ಬೆಳವಣಿಗೆಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು; | ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಆಡಳಿತದಲ್ಲಿ ಸುಧಾರಣೆ, ಸ್ಥಳೀಯರಿಗೆ ಉದ್ಯೋಗಾವಕಾಶ ಕಲ್ಪಿಸುವ ಡಾ:ಸರೋಜಿನಿ ಮಹಿಷಿ ವರದಿ ಅನುಷ್ಠಾನ, ತಂತ್ರಜ್ಞಾನದಲ್ಲಿ ಕನ್ನಡ ಅನುಷ್ಠಾನ ನ್ಯಾಯಾಂಗದಲ್ಲಿ ಕನ್ನಡ, ಕನ್ನಡ ಮಾಧ್ಯಮ ವಿದ್ಯಾರ್ಥಿಗಳಿಗೆ ಮಾಧ್ಯಮ ಪ್ರಶಸ್ತಿ, ಕವಿಗೋಷ್ಠಿ, ಕನ್ನಡ ನುಡಿ ಹಬ್ಬ, ಕನ್ನಡ ಜಾಗೃತಿ ಜಾಥಾ, ಕಾಲೇಜು ವಿದ್ಯಾರ್ಥಿಗಳಿಗೆ ಕನ್ನಡ ಜಾಗೃತಿ, ಹೊರರಾಜ್ಯಗಳಲ್ಲಿ ಉನ್ನತ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಿ ಕನ್ನಡವನ್ನು ಜನಸಮುದಾಯದ ಸಮೀಪಕ್ಕೆ ತೆಗೆದುಕೊಂಡು ಹೋಗುವ ಪ್ರಾಮಾಣಿಕ ಮತ್ತು ಬದ್ಧತೆಯ ಕೆಲಸ ಮಾಡುತ್ತಿದೆ. ಪ್ರಸ್ತುತ ಕಾನೂನು ಯಾವುದೂ ಇರುವುದಿಲ್ಲ. ಮುಂದಿನ ದಿನಗಳಲ್ಲಿ ಈ ಬಗ್ಗೆ ತೀರ್ಮಾನಿಸಲಾಗುವುದು. |
| ಉ) | ರಾಜ್ಯದಲ್ಲಿರುವ ಎಲ್ಲಾ ಕಂಪನಿಗಳು, ಉದ್ದಿಮೆಗಳು, ವ್ಯಾಪಾರ ಮಳಿಗೆಗಳು, ಬ್ಯಾಂಕ್, ಸೆಕ್ಯೂರಿಟಿ ಮತ್ತು ಸ್ವಚ್ಛತಾ ಸಿಬ್ಬಂದಿಗಳನ್ನು ಒದಗಿಸುವ ಸೇವೆ ನೀಡುವ ಕಂಪನಿಗಳು ಹಾಗೂ ಸಾರ್ವಜನಿಕರ ದೈನಂದಿನ ಕೆಲಸ ಕಾರ್ಯಗಳಿಗೆ ನೆರವಾಗುವ ಎಲ್ಲಾ ಸಿಬ್ಬಂದಿಗಳಿಗೆ ಸಂಬಂಧಿತ ಸಂಸ್ಥೆಗಳು ಕಡ್ಡಾಯವಾಗಿ ಕನ್ನಡ ಭಾಷಾ ತರಬೇತಿ ನೀಡಿದ ಬಳಿಕವೇ ರಾಜ್ಯದಲ್ಲಿ ಕೆಲಸಕ್ಕೆ ನಿಯೋಜನೆ ಮಾಡಬೇಕು ಎನ್ನುವ ಕುರಿತು ಕಾನೂನು ತರಲು ಸರ್ಕಾರ ಕ್ರಮ ಕೈಗೊಂಡಿದೆಯೇ? (ವಿವರ ನೀಡುವುದು) | |

ಸಂಖ್ಯೆ:ಕಸಂವಾ/123/ಕೆಓಎಲ್ ಆಕ/2022

(ವಿ.ಸುನಿಲ್ ಕುಮಾರ್)

ಇಂಧನ ಹಾಗು ಕನ್ನಡ ಮತ್ತು ಸಂಸ್ಕೃತಿ ಸಚಿವರು